ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರ ನ್ಯಾಯಾಲಯ,
ಬೆಂಗಳೂರು ಗ್ರಾಮಾಂತರ ಜಿಲ್ಲೆ, ಬೆಂಗಳೂರು

**S.C. No. 140/2024**
**C/w 304/2024**

| ಸಾಕ್ಷಿಯ ಹೆಸರು | ಶ್ರೀ. ಸಂತೋಷ್ ಕುಮಾರ್ | ಚಾಸಾಃ | ಪ್ರಾಸಾಃ |
|---|---|---|---|
| ತಂದೆಯ ಹೆಸರು | ಗೋಪಾಲ್ ನಾಯಕ್ | 8 | 6 |
| ವಯಸ್ಸು | 48 ವರ್ಷ | ಸಾಕ್ಷಿಯನ್ನು ಕರೆಸಿ ಪ್ರಮಾಣ ವಚನ ಭೋಧಿಸಲಾಯಿತು. ದಿನಾಂಕ **11.06.2026.** | |
| ಉದ್ಯೋಗ | ವ್ಯವಸಾಯ | | |
| ವಾಸ ಸ್ಥಳ | ಧರ್ಮನಾಯಕನ ತಾಂಡ್ಯ | | |

ಮುಖ್ಯ ವಿಚಾರಣೆಃ ಸರ್ಕಾರಿ ಅಭಿಯೋಜಕರಿಂದಃ

ನನಗೆ ನ್ಯಾಯಾಲಯದ ಮುಂದೆ ಇರುವ ಆರೋಪಿತರ ಪರಿಚಯ ಇಲ್ಲ. ಚಾಸಾ. 1 ಮತ್ತು 2 ರವರ ಪರಿಚಯ ಇಲ್ಲ. ಈ ಪ್ರಕರಣದ ಬಗ್ಗೆ ನನಗೆ ಏನು ಗೊತ್ತಿಲ್ಲ. ರಾಜಾ ರವರಿಗೆ ಗಾಯವಾದ ಬಗ್ಗೆ ಗೊತ್ತಿಲ್ಲ. ನಿಶಾನೆ.ಪಿ. 11 ರಲ್ಲಿ ನನ್ನ ಸಹಿ ಇದ್ದು ಅದನ್ನು ನಿಶಾನೆ.ಪಿ. 11 (ಎ) ಎಂದು ಗುರುತಿಸಲಾಯಿತು. ನಿಶಾನೆ.ಪಿ. 11 ರ ಒಕ್ಕಣೆ ಗೊತ್ತಿಲ್ಲ. ಸುಮಾರು 2 – 3 ವರ್ಷಗಳ ನೆಲಮಂಗಲ ಗ್ರಾಮಾಂತರ ಠಾಣೆಗೆ ಮಧ್ಯಾಹ್ನದ ಸಮಯದಲ್ಲಿ ಬೇರೆ ಯಾವುದೋ ಪ್ರಕರಣಕ್ಕೆ ಹೋಗಿದ್ದಾಗ ನಿಶಾನೆ.ಪಿ. 11 ಕ್ಕೆ ಸಹಿ ಪಡೆದುಕೊಂಡರು.

(ಈ ಸಾಕ್ಷಿಯನ್ನು ಅಭಿಯೋಜಕರು ಪ್ರತಿ ಕೂಲ ಸಾಕ್ಷಿ ಅಂತ ಪರಿಗಣಿಸಲು ಅನುಮತಿ ಕೇಳಿದ್ದು ಸಾಕ್ಷಿಯು ನೀಡಿದ್ದ ವ್ಯತಿರಿಕ್ತ ಹೇಳಿಕೆಯನ್ನು ಗಣನೆಗೆ ತೆಗೆದುಕೊಂಡು ಅನುಮತಿ ನೀಡಲಾಗಿದೆ)

ಪಾಟೀ ಸವಾಲುಃ ಸರ್ಕಾರಿ ಅಭಿಯೋಜಕರಿಂದಃ

ದಿನಾಂಕ 09.01.2018 ರಂದು ಸಂಡೇಕೊಪ್ಪ ಗ್ರಾಮದ ಚನ್ನಕೇಶವ ಸ್ವಾಮಿ ದೇವಸ್ಥಾನದ ಮುಂದೆ ಅಶ್ವಥ್ ಕಟ್ಟೆಯ ಬಳಿ ಕಿಶೋರ್ ರವರು ತೋರಿಸಿದ ಸ್ಥಳದಲ್ಲಿ ಪೊಲೀಸರು ಮಧ್ಯಾಹ್ನ 1.45-2.30 ಗಂಟೆಯವರೆಗೆ ಸ್ಥಳ ಪಂಚನಾಮೆಯನ್ನು ಮಾಡಿ ಬರೆದು ಓದಿ ಹೇಳಿದ ನಂತರ ಅಲ್ಲೇ ಸಹಿ

ಮಾಡಿರುತ್ತೇನೆ ಎಂದರೆ ಸರಿಯಲ್ಲ. ಆರೋಪಿತರೊಂದಿಗೆ ರಾಜೀ ಮಾಡಿಕೊಂಡು ಈಗ ಸುಳ್ಳು ಸಾಕ್ಷಿ ನುಡಿಯುತ್ತಿದ್ದೇನೆ ಎಂದರೆ ಸರಿ ಅಲ್ಲ.

ಪಾಟೀ ಸವಾಲುಃ ಆರೋಪಿತರ ಪರ ವಕೀಲರಿಂದ : ಇಲ್ಲ ಎಂದು ಹೇಳಿರುತ್ತಾರೆ.

ಮರು ವಿಚಾರಣೆ ಇಲ್ಲ

(ಈ ಸಾಕ್ಷಿದಾರರನ್ನು ತೆರೆದ ನ್ಯಾಯಾಲಯದಲ್ಲಿ ಸಾಕ್ಷಿ ವಿಚಾರಣೆ ಮಾಡಿದ್ದು ಅದನ್ನು ಯಥಾವತ್ತಾಗಿ ಉಕ್ತಲೇಖನ ನೀಡಿ ಬೆರಳಚ್ಚು ಮಾಡಿಸಲಾಯಿತು)

ಓ. ಹೇ. ಕೇ. ಸರಿ ಇದೆ,

**(ಶ್ರೀಮತಿ. ಬಿ.ಎಸ್.ರೇಖಾ )**
ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರು,
ಬೆಂಗಳೂರು ಗ್ರಾಮಾಂತರ ಜಿಲ್ಲೆ, ಬೆಂಗಳೂರು.